# Official Spokesperson's response to media queries on target killing of two Sikh traders in Peshawar, Pakistan

May 15, 2022

---

## ಪಾಕಿಸ್ತಾನದ ಪೇಶಾವರ್‌ನಲ್ಲಿ ಇಬ್ಬರು ಸಿಖ್ ಉದ್ಯಮಿಗಳ ಉದ್ದೇಶಿತ ಹತ್ಯೆಯ ಕುರಿತು ಮಾಧ್ಯಮದ ಪ್ರಶ್ನೆಗಳಿಗೆ ಅಧಿಕೃತ ವಕ್ತಾರರ ಪ್ರತಿಕ್ರಿಯೆ

ಮೇ 15, 2022

ಪಾಕಿಸ್ತಾನದ ಪೇಶಾವರದಲ್ಲಿ ಇಬ್ಬರು ಸಿಖ್ ಉದ್ಯಮಿಗಳ ಉದ್ದೇಶಿತ ಹತ್ಯೆಯ ಕುರಿತು ಮಾಧ್ಯಮದ ಪ್ರಶ್ನೆಗಳಿಗೆ ಪ್ರತಿಕ್ರಿಯೆಯಾಗಿ ಅಧಿಕೃತ ವಕ್ತಾರರು ಹೀಗೆ ಹೇಳಿದರು:

“ಪೇಶಾವರದಲ್ಲಿ ಅಪರಿಚಿತ ಶಸ್ತ್ರಧಾರಿಗಳಿಂದ ಇಬ್ಬರು ಸಿಖ್ ಉದ್ಯಮಿಗಳನ್ನು ಬರ್ಬರವಾಗಿ ಕೊಂದ ವರದಿಗಳನ್ನು ನಾವು ನೋಡಿದ್ದೇವೆ. ದುಃಖಕರವೆಂದರೆ, ಇದು ಮೊದಲ ಪ್ರಕರಣ ಅಥವಾ ಅಪರೂಪದ ಘಟನೆಯಲ್ಲ.

ಈ ಆಘಾತಕಾರಿ ಮತ್ತು ಖಂಡನೀಯ ಘಟನೆಯ ಬಗ್ಗೆ ಭಾರತೀಯ ನಾಗರಿಕ ಸಮಾಜದ ವಿವಿಧ ವಿಭಾಗಗಳು ಮತ್ತು ಸಿಖ್ ಸಮುದಾಯದಿಂದ ತೀವ್ರ ಕಳವಳ ವ್ಯಕ್ತವಾಗಿದೆ. ಪಾಕಿಸ್ತಾನದಲ್ಲಿ ಅಲ್ಪಸಂಖ್ಯಾತ ಸಮುದಾಯದ ಸದಸ್ಯರನ್ನು ನಿರಂತರವಾಗಿ ಗುರಿಯಾಗಿಸಿಕೊಂಡಿರುವುದನ್ನು ಕುರಿತು ನಾವು ಪಾಕಿಸ್ತಾನ ಸರ್ಕಾರದ ವಿರುದ್ಧ ನಮ್ಮ ಪ್ರಬಲವಾದ ಪ್ರತಿಭಟನೆಯನ್ನು ದಾಖಲಿಸಿದ್ದೇವೆ. ಈ ಬಗ್ಗೆ ಸಂಬಂಧಪಟ್ಟ ಅಧಿಕಾರಿಗಳು ಪ್ರಾಮಾಣಿಕವಾಗಿ ತನಿಖೆ ನಡೆಸಿ ಈ ಖಂಡನೀಯ ಘಟನೆಗೆ ಕಾರಣರಾದವರ ವಿರುದ್ಧ ಕಠಿಣ ಕ್ರಮಕೈಗೊಳ್ಳಬೇಕೆಂದು ನಾವು ಒತ್ತಾಯಿಸುತ್ತೇವೆ.  ಪಾಕಿಸ್ತಾನ ಸರ್ಕಾರವು ತನ್ನ ಜವಾಬ್ದಾರಿಗಳನ್ನು ನಿರ್ವಹಿಸುವಾಗ, ತನ್ನ ಅಲ್ಪಸಂಖ್ಯಾತ ಸಮುದಾಯಗಳ ಸುರಕ್ಷತೆ, ಭದ್ರತೆ ಮತ್ತು ಯೋಗಕ್ಷೇಮವನ್ನು ನೋಡಿಕೊಳ್ಳುತ್ತದೆ ಎಂದು ನಾವು ನಿರೀಕ್ಷಿಸುತ್ತೇವೆ. ”

**ನವ ದೆಹಲಿ**
**ಮೇ 15, 2022**

DISCLAIMER: This is an approximate translation. The original is available in English on MEA’s website and may be referred to as the official press release.